ಸಂಯುಕ್ತ ಕರ್ನಾಟಕ

# ಬದುಕು ಬರಹ ಸಂವಾದ ಕಾರ್ಯಕ್ರಮ

**ಸಂ.ಕ.ಸಮಾಚಾರ, ಮಂಗಳೂರು**

ಸಾಹಿತ್ಯ ಅಕಾಡೆಮಿ, ನವದೆಹಲಿ ವತಿಯಿಂದ ಕೊಂಕಣಿ ಸಾಹಿತಿಗಳು ಮತ್ತು ಕಲಾವಿದರ ಸಂಘಟನೆಯ ಆಶ್ರಯದಲ್ಲಿ ಮಂಗಳೂರಿನ ಸಂತ ಅಲೋಶಿಯಸ್ ಕಾಲೇಜಿನಲ್ಲಿ ಇಂದು 'ಥ್ರೂ ಮೈ ವಿಂಡೋ' ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಮುಂಬಯಿಯ ಖ್ಯಾತ ಕನ್ನಡ ಲೇಖಕಿ ಶ್ಯಾಮಲಾ ಮಾಧವ ಅವರು, ಕೊಂಕಣಿಯ ಪ್ರಪ್ರಥಮ ಪತ್ರಿಕೆ ದಿರ್ವೆಂ ಸ್ಥಾಪಕ-ವ್ಯವಸ್ಥಾಪಕ ಸರದಾರ ಲೂವಿಸ್ ಕಣ್ಣಪ್ಪ ಅವರ ಬದುಕು-ಬರಹದ ಕುರಿತು ಮಾತನಾಡಿದರು.

"ನಾವೆಲ್ಲರೂ ಕಾನಾಟಿ (ಅರ್ಥಾತ್ ದಪ್ಪ ಕನ್ನಡಕ ಧರಿಸುವ) ಅಜ್ಜ ಎಂದೇ ಕರೆಯುತಿದ್ದ ನನ್ನಜ್ಜ ಲೂವಿಸ್ ಕಣ್ಣಪ್ಪನವರಿಂದಲೇ ನನ್ನ ಬರವಣಿಗೆಗೆ ಮೊದಲ ಪ್ರೇರಣೆ ದೊರೆಯಿತು. ಸ್ವಾತಂತ್ರ್ಯ ಪೂರ್ವದಲ್ಲಿ ಮದ್ರಾಸ್ ವಿದ್ಯಾನಿಲಯದಿಂದ ಇಂಗ್ಲಿಷ್ ಸಾಹಿತ್ಯದಲ್ಲಿ ಎಂ.ಎ. ಮತ್ತು ಎಲ್.ಟಿ.ಪದವಿ ಪಡೆದಿದ್ದ ಲೂವಿಸ್ ಕಣ್ಣಪ್ಪನವರು ಮಂಗಳೂರು ಹಂಪನಕಟ್ಟೆಯ ಸರಕಾರಿ ಕಾಲೇಜಿನಲ್ಲಿ ಪ್ರಾಂಶುಪಾಲರಾಗಿ, ನಂತರ ದಕ. ಜಿಲ್ಲೆಯ ಶಿಕ್ಷಣಾಧಿಕಾರಿಯಾಗಿ ಕರ್ತವ್ಯ ಸಲ್ಲಿಸಿದ್ದರು. ಗಣಿತ ಹಾಗೂ ಲ್ಯಾಟಿನ್ ಭಾಷೆಯಲ್ಲಿ ಸಂತ ಅಲೋಶಿಯಸ್ ಕಾಲೇಜಿಗೆ ಪ್ರಪ್ರಥಮ ಬಾರಿ ರ‍್ಯಾಂಕ್ ತಂದುಕೊಟ್ಟ ಲೂವಿಸ್ ಕಣ್ಣಪ್ಪನವರು-ನನ್ನಣ್ಣನಿಗೆ ಗಣಿತ ಮತ್ತು ನನಗೆ ಇಂಗ್ಲಿಷ್ ಸಾಹಿತ್ಯ ಕಲಿಸಿದ್ದರು ಎಂದು ಸ್ಮರಿಸಿದರು.

ಲೂವಿಸ್ ಕಣ್ಣಪ್ಪ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವುದರ ಮೂಲಕ ಆರಂಭವಾದ ಕಾರ್ಯಕ್ರಮದಲ್ಲಿ ಸಾಹಿತ್ಯ ಅಕಾಡೆಮಿಯ ಕೊಂಕಣಿ ಭಾಷಾ ಸಲಹಾ ಸಮಿತಿ ಸದಸ್ಯ ಎಚ್. ಎಂ. ಪೆರ್ನಾಲ್ ಸ್ವಾಗತಿಸಿದರು. ಉಪನ್ಯಾಸದ ನಂತರ ಸಂವಾದ ಕಾರ್ಯಕ್ರಮ ನಡೆಯಿತು.

ಸಂವಾದ ಕಾರ್ಯಕ್ರಮದಲ್ಲಿ ಶ್ಯಾಮಲಾ ಮಾಧವ ಸಹೋದರ ಎನ್.ಜಿ.ಮೋಹನ್ ಸಾಥ್ ನೀಡಿದರು. ಸಾಹಿತ್ಯ ಅಕಾಡೆಮಿ ಕಾರ್ಯಕಾರಿ ಸಮಿತಿ ಸದಸ್ಯ, ಕೊಂಕಣಿ ವಿಭಾಗ ಮುಖ್ಯಸ್ಥ, ಕವಿ ಮೆಲ್ವಿನ್ ರೊಡ್ರಿಗಸ್, ಸಂತ ಅಲೋಶಿಯಸ್ ಕಾಲೇಜಿನ ಕೊಂಕಣಿ ಸಂಸ್ಥೆಯ ಮುಖ್ಯಸ್ಥ ಡಾ.ಮೆಲ್ವಿನ್ ಪಿಂಟೊ, ವಿಶನ್ ಕೊಂಕಣಿ ಪ್ರವರ್ತಕ, ಎಂ.ಸಿ.ಸಿ.ಬ್ಯಾಂಕ್ ಅಧ್ಯಕ್ಷ ಅನಿಲ್ ಲೋಬೊ, ಸ್ಟೀವನ್ ಪಿಂಟೊ ಮತ್ತು ಕಲಾವಿದರ ಸಂಘಟನೆಯ ಅಧ್ಯಕ್ಷ ರೊನಾಲ್ಡ್ ಸಿಕ್ವೇರಾ, ಕಾರ್ಯದರ್ಶಿ, ಫ್ಲೋರಿನ್ ರೋಚ್, ಕೋಶಾಧಿಕಾರಿ ರೋಶನ್ ಮಾಡ್ತಾ, ಲೂವಿಸ್ ಕಣ್ಣಪ್ಪ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು. ಲೂವಿಸ್ ಕಣ್ಣಪ್ಪರವರ ಭಾವಚಿತ್ರಕ್ಕೆ ಪುಷ್ಪ ನಮನದ ಮೂಲಕ ಗೌರವಾರ್ಪಣೆ ಸಲ್ಲಿಸಿದರು.

